ನಾಗಮಂಗಲದ ಕೃಷಿ ಉತ್ಪನ್ನ ಮಾರುಕಟ್ಟೆ

477 - ಶ್ರೀ ಚೆಲುವರಾಯಸ್ವಾಮಿ ಎಸ್. (ನಾಗಮಂಗಲ) : ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ನಾಗಮಂಗಲ ತಾಲ್ಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಕೆ.ಆರ್. ಪೇಟೆಯಿಂದ ಬೇರ್ಪಟ್ಟು, ನಾಗಮಂಗಲದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆಯು ಈಗ 2 ವರ್ಷಗಳಿಂದ ಅಸ್ತಿತ್ವಕ್ಕೆ ಬಂದಿದ್ದು, ಅಂದಿನಿಂದ ಇಂದಿನವರೆಗೂ ಸದರಿ ಸಮಿತಿಗೆ ನಾಮಕರಣಗೊಂಡ ಸದಸ್ಯರೇ ಆಡಳಿತ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ರಾಜ್ಯದಲ್ಲಿರುವ 21 ಎಪಿಎಂಸಿಗೆ ಹೊಸದಾಗಿ ಚುನಾವಣೆ ನಡೆಸಲು ಆದೇಶ ನೀಡಿರುವುದು ನಿಜವೆ?*

ಇ) *ಹಾಗಿದ್ದಲ್ಲಿ ನಾಗಮಂಗಲ ಎಂಪಿಎಂಸಿ ಗೂ ಹೊಸದಾಗಿ ಚುನಾವಣೆ ನಡೆಸಲು ಸರ್ಕಾರ ಆದೇಶಿಸುವುದೇ?*

ಶ್ರೀ ಆರ್.ಬಿ. ತಿಮ್ಮಾಪುರ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) :

ಅ) ಹೌದು. ಅಧ್ಯಕ್ಷರನ್ನು ಮಾತ್ರ ಬದಲಾಯಿಸಲಾಗಿದೆ. ಉಳಿದಂತೆ ಹಿಂದೆ ನಾಮನಿರ್ದೇಶನ ಮಾಡಲಾದ ಸದಸ್ಯರೇ ಮುಂದುವರೆದಿದ್ದಾರೆ.

ಆ) ರಾಜ್ಯದಲ್ಲಿ ಒಟ್ಟು 140 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿವೆ. 109 ಮಾರುಕಟ್ಟೆ ಸಮಿತಿಗಳಿಗೆ ಚನಾವಣೆ ನಡೆಸಲಾಗಿದೆ. 12 ನಾಮ ನಿರ್ದೇಶಿತ ಸಮಿತಿಗಳಿಗೆ ಈ ಪೈಕಿ 1 ಸಮಿತಿಗೆ ಚುನಾವಣೆ ನಡೆಸಲು ಆದೇಶಿಸಲಾಗಿದೆ. ಮತ್ತು 19 ಮಾರುಕಟ್ಟೆ ಸಮಿತಿಗಳಲ್ಲಿ ಆಡಳಿತಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.

ಮೇಲಿನ 19 ಮಾರುಕಟ್ಟೆ ಸಮಿತಿಗಳಲ್ಲಿ 5 ಸಮಿತಿಗಳಿಗೆ ಚುನಾವಣೆ ನಡೆಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಉಳಿದ 9 ಸಮಿತಿಗಳಿಗೆ ಚುನಾವಣೆ ನಡೆಸುವುದಕ್ಕಾಗಿ ಮತದಾರರ ಪಟ್ಟಿ ಪರಿಷ್ಕರಣೆ ಮುಂತಾದ ಪೂರ್ವಸಿದ್ಧತೆ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಆದೇಶ ನೀಡಲಾಗಿದೆ.

ಇ) ನಾಗಮಂಗಲ ಮಾರುಕಟ್ಟೆ ಸಮಿತಿಯ ಅಧಿಕಾರಾವಧಿಯು ದಿನಾಂಕ 12-11-2000ಕ್ಕೆ ಮುಕ್ತಾಯವಾಗಲಿದ್ದು, ನಂತರ ಚುನಾವಣೆ ನಡೆಸಲು ಕ್ರಮ ಜರುಗಿಸಲಾಗುವುದು.

ಭೂ ಅಭಿವೃದ್ಧಿ ಬ್ಯಾಂಕ್‌ನಲ್ಲಿನ ಆಡಳಿತ ಮಂಡಳಿ

478 - ಶ್ರೀ ಚಲುವರಾಯಸ್ವಾಮಿ ಎಸ್. ಸ್ವಾಮಿಗೌಡ (ನಾಗಮಂಗಲ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ನಾಗಮಂಗಲ ತಾಲ್ಲೂಕಿನ ಭೂ ಅಭಿವೃದ್ಧಿ ಬ್ಯಾಂಕಿನಲ್ಲಿ ಆಡಳಿತ ಮಂಡಳಿಯು*

ಅಸ್ತಿತ್ವಕ್ಕೆ ಬಂದು 7 ವರ್ಷಗಳು ಮುಗಿದಿದೆ. ಆದರೆ ಸಹಕಾರ ಕಾಯ್ದೆ ಪ್ರಕಾರ ವಾರ್ಷಿಕ ಮಹಾಸಭೆ ಆಗಲಿ ಯಾವುದೇ ಚುನಾವಣೆ ನೆಡೆಯದ ಆಡಳಿತ ಮಂಡಳಿಯು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಚುನಾವಣೆ ನಡೆಸದೆ ಆಡಳಿತ ನಡೆಸುತ್ತಿರುವ ಈ ಆಡಳಿತ ಮಂಡಳಿಯನ್ನು ರದ್ದುಪಡಿಸಿ ಸರ್ಕಾರವು ಈ ಕೂಡಲೇ ಆಡಳಿತಾಧಿಕಾರಿಯನ್ನು ನೇಮಿಸಲು ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಡಿ.ಕೆ. ಶಿವಕುಮಾರ್ (ಸಹಕಾರ ಸಚಿವರು) :

ಅ) ದಿನಾಂಕ : 9-2-92 ರಂದು ಚುನಾವಣೆ ಹಾಗೂ ದಿನಾಂಕ : 27-12-98 ವಾರ್ಷಿಕ ಮಹಾಸಭೆ ಜರುಗಿದ್ದುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು.

ಕೋಲಾರ ಜಿಲ್ಲೆಯಲ್ಲಿ ಬರ ಪರಿಹಾರಕ್ಕೆ ಕಾಮಗಾರಿಗಳು

480 - ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಕಂದಾಯ ಮಂತ್ರಿಗಳು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕೋಲಾರ ಜಿಲ್ಲೆಯಲ್ಲಿ, ಆದರಲ್ಲೂ ಚಿಂತಾಮಣಿ ಮತ್ತು ಬಾಗೇಪಲ್ಲಿ ತಾಲ್ಲೂಕುಗಳಲ್ಲಿ ತೀವ್ರತರವಾದ ಬರಪರಿಸ್ಥಿತಿ ತಲೆದೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಬರಪೀಡಿತ ಪ್ರದೇಶಗಳಲ್ಲಿನ ಜನರಿಗೆ ಉದ್ಯೋಗ ಒದಗಿಸಲು ಕ್ರಮ ಕೈಗೊಳ್ಳಲಾಗಿದೆಯೇ? (ಈ ಉದ್ದೇಶಕ್ಕಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ, ಎಷ್ಟು ಜನರನ್ನು ನೇಮಕ ಮಾಡಿದೆ ಹಾಗೂ ಹಣ ವೆಚ್ಚ ಮಾಡಲಾಗಿದೆ ಎಂಬ ವಿವರ ಒದಗಿಸುವುದು).

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಹೌದು.

ಆ) ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ರೂ. 200 ಲಕ್ಷಗಳನ್ನು ಉದ್ಯೋಗ ಸೃಜನೆ ಕಾರ್ಯಕ್ರಮಗಳಿಗಾಗಿ ಬಿಡುಗಡೆ ಮಾಡಲಾಗಿದೆ. ಈ ದಿಶೆಯಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರರುಗಳನ್ನು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದ್ದು ವಿವಿಧ ಕಾರ್ಯಕ್ರಮಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗುತ್ತದೆ.

ಅಂಗನವಾಡಿ ಕಟ್ಟಡಗಳ ನಿರ್ಮಾಣದ ಬಗ್ಗೆ

481 - ಶ್ರೀ. ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಟ್ಟಡಗಳು ಇಲ್ಲದೇ ಇರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಈಗ ಇರುವ